ಕರ್ನಾಟಕ ಸರ್ಕಾರ

**ಜುಲೈ 18, 2017**

# ಕರ್ನಾಟಕ ರಾಜ್ಯಕ್ಕೆ ಪ್ರತ್ಯೇಕ ಧ್ವಜ : ಮುಖ್ಯಮಂತ್ರಿ ಪ್ರತಿಕ್ರಿಯೆ

**ಬೆಂಗಳೂರು, ಜುಲೈ 18:**

ಕನ್ನಡ ನಾಡಿಗೆ ಪ್ರತ್ಯೇಕ ಧ್ವಜವನ್ನು ವಿನ್ಯಾಸಗೊಳಿಸಿ ಅದಕ್ಕೆ ಕಾನೂನಿನ ಸ್ವರೂಪ ನೀಡುವಂತೆ ಡಾ ಪಾಟೀಲ ಪುಟ್ಟಪ್ಪ ಅವರೂ ಸೇರಿದಂತೆ ಹಲವಾರು ಕನ್ನಡಪರ ಹೋರಾಟಗಾರರು ಸಲ್ಲಿಸಿರುವ ಮನವಿಗಳ ಪರಿಶೀಲನೆಗೆ ರಾಜ್ಯ ಸರ್ಕಾರ ಈಗಾಗಲೇ ಸಮಿತಿಯೊಂದನ್ನು ರಚನೆ ಮಾಡಲಾಗಿದೆ. ಆ ಸಮಿತಿ ನೀಡುವ ಶಿಫಾರಸ್ಸುಗಳನ್ನು ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯೆ ನೀಡಿದ್ದಾರೆ.

ನಮ್ಮ ರಾಜ್ಯದಲ್ಲಿ ಈಗಾಗಲೇ ನಾಡಗೀತೆ ಅಧಿಕೃತವಾಗಿ ಇದೆ. ಅದೇ ರೀತಿ ನಾಡ ಧ್ವಜ ಇದ್ದರೆ ತಪ್ಪೇನೂ ಇಲ್ಲ. ಆದರೆ, ರಾಜ್ಯ ಸರ್ಕಾರ ಈ ವಿಚಾರದಲ್ಲಿ ಪ್ರಸ್ತುತ ಯಾವುದೇ ತೀರ್ಮಾನ ಕೈಗೊಂಡಿಲ್ಲ. ಸಮಿತಿ ನೀಡುವ ವರದಿ ಆಧರಿಸಿ ಮುಂದಿನ ನಿರ್ಣಯವನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ.

ಆದರೆ ಈ ವಿಚಾರಕ್ಕೆ ವಿವಾದದ ಸ್ವರೂಪ ನೀಡುವ ಪ್ರಯತ್ನ ನಡೆಯುತ್ತಿದೆ. ಭಾರತೀಯ ಜನತಾ ಪಕ್ಷದ ನಾಯಕರು ಇಂತಹ ವಿಷಯದಲ್ಲಿ ಅಪಪ್ರಚಾರ ಮಾಡುವುದು ಸರಿಯಲ್ಲ. ಕರ್ನಾಟಕಕ್ಕೆ ಪ್ರತ್ಯೇಕ ಧ್ವಜ ಬೇಡ ಎಂದು ಅವರು ಹೇಳಿಕೆ ಕೊಡಲಿ ಎಂದು ಸವಾಲು ಹಾಕಿದ್ದಾರೆ.

ವಿಧಾನಸಭೆಗೆ ಚುನಾವಣೆ ಸಮೀಪಿಸುತ್ತಿದೆ ಎಂಬ ಹಿನ್ನೆಲೆಯಲ್ಲಿ ಸಮತಿ ರಚನೆ ಮಾಡಿಲ್ಲ. ಚುನಾವಣೆ ಇರುವುದು ಮುಂದಿನ ವರ್ಷದ ಮೇ ತಿಂಗಳಿನಲ್ಲಿ ನಾಳೆ ಅಥವಾ ನಾಳಿದ್ದು ಅಲ್ಲ. ಪ್ರತ್ಯೇಕ ಧ್ವಜ ಕುರಿತು ಸಂವಿಧಾನದಲ್ಲಿ ಏನಿದೆ ? ಎಂಬುದನ್ನು ತಿಳಿದು ಕೊಂಡು

ಭಾರತೀಯ ಜನತಾ ಪಕ್ಷದ ನಾಯಕರು ಮಾತನಾಡಲಿ ಎಂದು ಸಿದ್ದರಾಮಯ್ಯ ಅವರು ಸಲಹೆ ಮಾಡಿದ್ದಾರೆ.

ರಾಜ್ಯ ಪ್ರತ್ಯೇಕ ಧ್ವಜ ಹೊಂದುವುದು ರಾಷ್ಟ್ರೀಯತೆ ಅಥವಾ ದೇಶದ ಏಕತೆಗೆ ವಿರುದ್ಧ ಅಲ್ಲ. ಇದರಿಂದ ರಾಷ್ಟ್ರ ಧ್ವಜದ ಮೇಲಿನ ಗೌರವ ಕಡಿಮೆ ಆಗುವುದಿಲ್ಲ. ನಾವು ದೇಶಕ್ಕೆ ಗೌರವ ಕೊಟ್ಟೇ ಕೊಡುತ್ತೇವೆ.

ರಾಷ್ಟ್ರ ಧ್ವಜ ಯಾವಾಗಲೂ ಎತ್ತರದಲ್ಲಿ ಹಾರಾಡಬೇಕು.  ಅದನ್ನು ಮೀರಿಸಿ ಮತ್ತೊಂದು ಧ್ವಜವನ್ನು ಹಾರಿಸುವ ಪ್ರಶ್ನೆಯೇ ಇಲ್ಲ. ಎಲ್ಲಕ್ಕಿಂತಲೂ ಮುಖ್ಯವಾಗಿ ಪ್ರತ್ಯೇಕ ಧ್ವಜ ಹೊಂದುವುದಕ್ಕೆ ಸಂವಿಧಾನದಲ್ಲಿ ಯಾವುದೇ ನಿರ್ಬಂಧ ಇಲ್ಲ ಎಂದು ಮುಖ್ಯಮಂತ್ರಿ ಸ್ಪಷ್ಟನೆ ನೀಡಿದ್ದಾರೆ.

***********

ಡಿ ಪಿ ಎಂ